# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : 1(60) |
| ಸದಸ್ಯರ ಹೆಸರು | : ಶ್ರೀ ಎಂ.ಎಲ್.ಅನಿಲ್ ಕುಮಾರ್ |
| ಉತ್ತರಿಸುವ ದಿನಾಂಕ | : 13.02.2024 |
| ಉತ್ತರಿಸುವ ಸಚಿವರು | : ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದ ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯಿತಿಗಳ ಚುನಾವಣೆ ಫಲಿತಾಂಶ ಪ್ರಕಟವಾಗಿ ಮೊದಲನೇ ಅವಧಿಯ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಅವಧಿ ಮುಗಿದಿದ್ದು, 2ನೇ ಅವಧಿಯ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಮೀಸಲಾತಿ ಪ್ರಕಟಿಸದಿರಲು ಕಾರಣವೇನು; ಎರಡನೇ ಅವಧಿಗೆ ಮೀಸಲಾತಿ ಮಾಡದಿರುವುದರಿಂದ ಯಾವುದೇ ಸಭೆ ನಡೆಯದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು; (ಸಂಪೂರ್ಣ ಮಾಹಿತಿ ನೀಡುವುದು) | ಅಧ್ಯಕ್ಷ/ ಉಪಾಧ್ಯಕ್ಷರ ಮೀಸಲಾತಿ ನಿಗಧಿಪಡಿಸುವುದಕ್ಕೆ ಸಂಬಂಧಿಸಿದಂತೆ ಈ ಕೆಳಕಂಡ ನ್ಯಾಯಾಲಯ ಪ್ರಕರಣಗಳು ಬಾಕಿ ಇರುತ್ತವೆ;-<br><br>1) ಮಾನ್ಯ ಸರ್ವೋಚ್ಚ ನ್ಯಾಯಾಲಯದ ಎಸ್.ಎಲ್.ಪಿ. ಸಂಖ್ಯೆ:19756/2021ರಲ್ಲಿ ದಿನಾಂಕ:15.12.2021 ರಂದು ನೀಡಿರುವ ತೀರ್ಪು ಹಾಗೂ Manmohan Nagar V/s State of Madhya Pradesh & Others ರವರು ಸಲ್ಲಿಸಿರುವ ಮಿಸಲೇನಿಯಸ್ ಅಪ್ಲಿಕೇಷನ್ ಸಂಖ್ಯೆ:31495/2021ಗೆ ಸಂಬಂಧಿಸಿದಂತೆ ದಿನಾಂಕ:17.12.2021ರಂದು ನೀಡಿರುವ ಆದೇಶದನ್ವಯ ಪಂಚಾಯತ್ ರಾಜ್ ಸಂಸ್ಥೆಗಳಲ್ಲಿ ಮತ್ತು ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹಿಂದುಳಿದ ವರ್ಗಗಳಲ್ಲಿ ರಾಜಕೀಯ ಹಿಂದುಳಿದಿರುವಿಕೆಯನ್ನು ಗುರುತಿಸಲು ಹಾಗೂ ಸದರಿ ಹಿಂದುಳಿದ ವರ್ಗಗಳಿಗೆ ಸೂಕ್ತ ರಾಜಕೀಯ ಪ್ರಾತಿನಿಧ್ಯ ಕಲ್ಪಿಸಲು ಅಧ್ಯಯನ ನಡೆಸಿ ಶಿಫಾರಸ್ಸು ಮಾಡಲು ನಿವೃತ್ತ ನ್ಯಾಯಾಧೀಶರಾದ ಡಾ\|\| ಜಸ್ಟೀಸ್ ಕೆ.ಭಕ್ತವತ್ಸಲ ರವರ ಅಧ್ಯಕ್ಷತೆಯಲ್ಲಿ ಆಯೋಗವನ್ನು ರಚಿಸಲಾಗಿರುತ್ತದೆ. ಪ್ರಸ್ತುತ ಆಯೋಗವು ಅಂತಿಮ ವರದಿಯನ್ನು ನೀಡಿದ್ದು, ಈ ವರದಿಯನ್ನು ದಿನಾಂಕ:05.10.2023ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಚರ್ಚಿಸಿ ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆ ವಿಷಯವನ್ನು ನಿರ್ವಹಿಸಲು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ವ್ಯಾಪ್ತಿಗೆ ಹಸ್ತಾಂತರಿಸಲು ಅನುಮೋದನೆ ನೀಡಿರುತ್ತದೆ. ಆದ್ದರಿಂದ ನಗರಾಭಿವೃದ್ಧಿ ಇಲಾಖೆಯಿಂದ ನಗರ ಸ್ಥಳೀಯ ಸಂಸ್ಥೆಗಳ ಚುನಾವಣೆ ವಿಷಯವನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಗೆ ಹಸ್ತಾಂತರಿಸುವ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ. ಆದರೆ ಈ ಮಧ್ಯೆ ಮಾನ್ಯ ಮುಖ್ಯಮಂತ್ರಿಗಳು "ಈಗಿರುವ ಆಡಳಿತಾತ್ಮಕ ವ್ಯವಸ್ಥೆಯನ್ನು ಮುಂದುವರೆಸಲು ಸಚಿವ ಸಂಪುಟದ ಮುಂದೆ ವಿಷಯವನ್ನು ತರಲು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ಸೂಚಿಸುವುದು" ಎಂದು ನಿರ್ದೇಶಿಸಿದ ಹಿನ್ನಲೆಯಲ್ಲಿ ವಿಷಯವನ್ನು ಸಚಿವ ಸಂಪುಟದ ಮುಂದೆ ಮಂಡಿಸಲು ಅಗತ್ಯ ಕ್ರಮವಹಿಸುವಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯನ್ನು ದಿನಾಂಕ:26.12.2023ರ ಅನಧಿಕೃತ ಟಿಪ್ಪಣಿಯಲ್ಲಿ ಕೋರಲಾಗಿದೆ. ಸದರಿ ಇಲಾಖೆಯಿಂದ ಆದೇಶದ ಪ್ರತಿಯನ್ನು ನಿರೀಕ್ಷಿಸಲಾಗಿದೆ. |

| | | |
|---|---|---|
| | | 2) ರಾಜ್ಯದಲ್ಲಿನ ಕೆಲವು ನಗರ ಸ್ಥಳೀಯ ಸಂಸ್ಥೆಗಳ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಹುದ್ದೆಗಳ ಮೀಸಲಾತಿಗೆ ಸಂಬಂಧಿಸಿದಂತೆ ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಎಸ್.ಎಲ್.ಪಿ. (ಸಿವಿಲ್) ಸಂಖ್ಯೆ:7090/2021 ದಾಖಲಾಗಿದ್ದು, ಪ್ರಕರಣದ ವಿಚಾರಣೆಯ ಸಂದರ್ಭದಲ್ಲಿ ಮಾನ್ಯ ನ್ಯಾಯಾಲಯವು ರಾಜ್ಯದಲ್ಲಿರುವ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳಿಗೆ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಗಳಿಗೆ 1 ರಿಂದ 10ನೇ ಅವಧಿಗೆ ಮೀಸಲಾತಿಯನ್ನು NIC ಮೂಲಕ ಸಾಫ್ಟ್‌ವೇರ್ ಮಾಡಿ ನಿಗದಿಪಡಿಸುವಂತೆ ನಿರ್ದೇಶನ ನೀಡಿರುತ್ತದೆ. ಸದರಿ ನಿರ್ದೇಶನದನ್ವಯ NIC ರವರು ಒದಗಿಸಿರುವ ಮೀಸಲಾತಿಯನ್ನು ಪರಿಶೀಲಿಸಿ ಮಾನ್ಯ ಸರ್ವೋಚ್ಚ ನ್ಯಾಯಾಲಯಕ್ಕೆ ಅಫಿಡವಿಟ್ ದಾಖಲಿಸಲಾಗಿದೆ. ಪ್ರಕರಣವು ದಿನಾಂಕ:21.02.2024 ರಂದು ವಿಚಾರಣೆಗೆ ಬರಲಿದೆ.<br><br>ಮಾನ್ಯ ಸರ್ವೋಚ್ಚ ನ್ಯಾಯಾಲಯದ ಅಂತಿಮ ತೀರ್ಪು ಬಂದ ನಂತರ ಸರ್ಕಾರದಿಂದ ಈ ಬಗ್ಗೆ ಸೂಕ್ತ ಕ್ರಮವಹಿಸಲಾಗುವುದು.<br><br>ಸ್ಥಳೀಯ ಸಂಸ್ಥೆಗಳ ಆಡಳಿತದ ಅಗತ್ಯತೆಗೆ ಅನುಗುಣವಾಗಿ ಸಭೆಗಳನ್ನು ನಡೆಸಲು ನಿರ್ಧಾರ ತೆಗೆದುಕೊಳ್ಳುವ ಅಧಿಕಾರ ಆಡಳಿತಾಧಿಕಾರಿಯ ವ್ಯಾಪ್ತಿಗೆ ಒಳಪಟ್ಟಿರುತ್ತದೆ. |
| (ಆ) | ಸರ್ಕಾರವು ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಮೀಸಲಾತಿ ಪ್ರಕಟಿಸದೆ ಆಡಳಿತಾಧಿಕಾರಿಗಳನ್ನು ನೇಮಿಸಿರುವುದರಿಂದ ಅಭಿವೃದ್ಧಿ ಕಾರ್ಯ ಕುಂಠಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು; (ಸಂಪೂರ್ಣ ಮಾಹಿತಿ ನೀಡುವುದು) | ಅಧ್ಯಕ/ಉಪಾಧ್ಯಕ್ಷ ಸ್ಥಾನದ ಅವಧಿ ಮುಕ್ತಾಯಗೊಂಡಿರುವ ನಗರ ಸ್ಥಳೀಯ ಸಂಸ್ಥೆಗಳ ಆಡಳಿತ ಹಿತದೃಷ್ಟಿಯಿಂದ ಆಡಳಿತಾಧಿಕಾರಿಗಳನ್ನು ನೇಮಕ ಮಾಡಿರುವುದರಿಂದ ಅಭಿವೃದ್ಧಿ ಕಾರ್ಯಗಳಿಗೆ ಯಾವುದೇ ತೊಂದರೆ ಉಂಟಾಗಿರುವುದಿಲ್ಲ. |
| (ಇ) | ಸ್ಥಳೀಯ ಸಂಸ್ಥೆಗಳ ಚುನಾವಣೆ ನಡೆದು ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಮೊದಲನೇ ಅವಧಿ ಮುಗಿದ, ಎರಡನೇ ಅವಧಿಗೆ ಈಗಾಗಲೇ ಮೀಸಲಾ ಮೀಸಲಾತಿ ಪ್ರಕಟಿಸಲು ವಿಳಂಬವಾಗಿರುವುದರಿಂದ ವಿಜೇತರಾದ ಸದಸ್ಯರುಗಳಿಗೆ ಅಧಿಕಾರ ಸಿಗದಿರುವುದರಿಂದ ಸದಸ್ಯರ ಅವಧಿಯನ್ನು ಮುಂದುವರೆಸಲು ಸರ್ಕಾರ ಯೋಚಿಸಿದೆಯೇ; ಹಾಗಿದ್ದಲ್ಲಿ, ಎರಡನೇ ಅವಧಿಗೆ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಅವಧಿ ಎಷ್ಟು? (ಪೂರ್ಣವಾದ ಮಾಹಿತಿ ನೀಡುವುದು) | ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ರ ಸೆಕ್ಷನ್ 42 ರ ಪ್ರಕಾರ ಕೌನ್ಸಿಲರ್‌ಗಳ ಅವಧಿಯು ಚುನಾವಣೆ ನಡೆದ ನಂತರ ಪ್ರಥಮ ಸಭೆ ನಡೆದ ದಿನಾಂಕದಿಂದ 05 ವರ್ಷಗಳಾಗಿರುತ್ತದೆ. ಅದರಂತೆ ಚುನಾಯಿತ ಕೌನ್ಸಿಲರ್‌ಗಳ ಅವಧಿಯನ್ನು ವಿಸ್ತರಿಸಲು ಅವಕಾಶವಿರುವುದಿಲ್ಲ. |

**ಸಂಖ್ಯೆ**: ನಅಇ 01 ಎಲ್‌ಸಿಕ್ಯೂ 2024

(ರಹೀಂ ಖಾನ್)
ಪೌರಾಡಳಿತ ಮತ್ತು ಹಜ್ ಸಚಿವರು